ಕಡಲ ಕೊರೆತವನ್ನು ತಡೆಗಟ್ಟುವುದು

21 (37) ಶ್ರೀ ಖಾದರ್ ಯು.ಟಿ. (ಮಂಗಳೂರು): ಮಾನ್ಯ ಬಂದರು, ಒಳನಾಡು ಜಲಸಾರಿಗೆ ಹಾಗೂ ಪರಿಸರ ಮತ್ತು ಜೀವಿಶಾಸ್ತ್ರ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಮೀನುಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಉಳ್ಳಾಲದಲ್ಲಿ ಕಡಲ ಕೊರೆತವನ್ನು ತಡೆಗಟ್ಟಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

ಆ) ಈ ವರ್ಷ ಕಡಲ ಕೊರೆತವನ್ನು ತಡೆಯಲು ಸರ್ಕಾರ ಮುಂಜಾಗ್ರತೆ ಕ್ರಮಗಳನ್ನು ಕೈಗೊಳ್ಳಲು ಉದ್ದೇಶಿಸಿದೆಯೇ ;

ಇ) ಹಾಗಿದ್ದಲ್ಲಿ, ಈ ಕಾರ್ಯಗಳಿಗೆ ಸರ್ಕಾರ ಎಷ್ಟು ಹಣವನ್ನು ವೆಚ್ಚ ಮಾಡಲು ಉದ್ದೇಶಿಸಿದೆ ; ಇದುವರೆವಿಗೂ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ?

ಶ್ರೀ ಜೆ. ಕೃಷ್ಣ ಪಾಲೇಮಾರ್ (ಬಂದರು, ಒಳನಾಡು ಜಲಸಾರಿಗೆ ಹಾಗೂ ಪರಿಸರ ಮತ್ತು ಜೀವಿಶಾಸ್ತ್ರ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಮೀನುಗಾರಿಕೆ ಸಚಿವರು):

ಅ) ರಾಜ್ಯದ ಕರಾವಳಿಯಲ್ಲಿ ಸಮುದ್ರ ಕೊರೆತ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ADBಯ ಆರ್ಥಿಕ ಸಹಾಯ ಪಡೆಯಲು ಉದ್ದೇಶಿಸಲಾಗಿದ್ದು ಪ್ರಥಮ ಹಂತದಲ್ಲಿ ಉಳ್ಳಾಲದ ಸಮುದ್ರ ಕೊರೆತ ಸಮಸ್ಯೆ ಪರಿಹಾರಕ್ಕಾಗಿ ₹ 223.32 ಕೋಟಿ ಅಂದಾಜಿನ ಯೋಜನೆಗೆ ರಾಜ್ಯ ಸರ್ಕಾರವು ಮಂಜೂರಾತಿ ನೀಡಿರುತ್ತದೆ. ಕೇಂದ್ರೀಯ ಜಲ ಆಯೋಗದ TAC ಅನುಮೋದನೆ ಪ್ರಕ್ರಿಯೆ ಅಂತಿಮ ಹಂತದಲ್ಲಿದ್ದು, ವಿವಿಧೋದ್ದೇಶದ

2 offshore Reef ಮತ್ತು 4 in shore berm ಕಾಮಗಾರಿಯ ಟೆಂಡರು ಕರೆಯಬೇಕಾಗಿದೆ.

ಮಳೆಗಾಲದಲ್ಲಿ ಸಂಭವಿಸುವ ಸಮುದ್ರ ಕೊರೆತವನ್ನು ತಡೆಗಟ್ಟಲು ತಾತ್ಕಾಲಿಕ ತುರ್ತು ತಡೆಗೋಡೆಗಳನ್ನು ನಿರ್ಮಿಸಲಾಗುತ್ತಿದೆ.

ಆ) ಹೌದು. ಜನ ಪ್ರತಿನಿಧಿಗಳು ಹಾಗೂ ಜಿಲ್ಲಾಡಳಿತದ ಸಲಹೆಯಂತೆ ತೀವ್ರ ಸಮುದ್ರ ಕೊರೆತ ಉಂಟಾದ ಪ್ರದೇಶಗಳಲ್ಲಿ ತುರ್ತು ಕಾಮಗಾರಿಗಳನ್ನು ಕೈಗೊಳ್ಳಲಾಗುವುದು.

ಇ) ADB ಸಹಾಯದೊಂದಿಗೆ ₹ 223.32 ಕೋಟಿ ಅಂದಾಜು ವೆಚ್ಚದಲ್ಲಿ ಉಳ್ಳಾಲದಲ್ಲಿನ ಸಮುದ್ರ ಕೊರೆತ ಸಮಸ್ಯೆಗೆ ಪರಿಹಾರ ಒದಗಿಸಲು ಯೋಜಿಸಲಾಗಿದೆ. ಈ ಯೋಜನೆಗೆ ಕೇಂದ್ರೀಯ ಜಲ ಆಯೋಗದ ಅನುಮೋದನೆ ದೊರೆತ ನಂತರ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಬೇಕಾಗಿರುತ್ತದೆ.

ತೆಂಗಿನ ನಾರಿನ ಮಹಾಮಂಡಳಿ ಲೆಕ್ಕಪರಿಶೋಧನೆ

22 (5) ಶ್ರೀ ಎಂ.ಟಿ. ಕೃಷ್ಣಪ್ಪ (ತುರುವೇಕೆರೆ): ಮಾನ್ಯ ಸಹಕಾರ ಮತ್ತು ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯ ತೆಂಗಿನ ನಾರಿನ ಮಹಾಮಂಡಳಿಯ ಶಾಸನಬದ್ಧ ಲೆಕ್ಕಪರಿಶೋಧನೆಯು ಯಾವ ವರ್ಷದಿಂದ ಬಾಕಿ ಉಳಿದಿದೆ ;

ಆ) ಸಹಕಾರ ಸಂಸ್ಥೆಯ ಲೆಕ್ಕಪರಿಶೋಧನೆಯನ್ನು ಕೈಗೊಂಡಿರುವ/ ಕೈಗೊಳ್ಳುತ್ತಿರುವ ಲೆಕ್ಕಪರಿಶೋಧಕರು ಯಾರು ; (ವಿವರಗಳನ್ನು ನೀಡುವುದು)